ಕರ್ನಾಟಕ ಸರ್ಕಾರ

**ಅಧ್ಯಕ್ಷರ ಕಛೇರಿ, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು-03**

ಸಂಖ್ಯೆ : ಕ.ಶಾ.ಪ & ಮೌ.ನಿ.ಮಂ/ಪರೀಕ್ಷೆ/ಪ್ರಾ.ಪ.ಬ.ಅ/2022-23 ದಿನಾಂಕ : 20.02.2023

## ಸುತ್ತೋಲೆ

ವಿಷಯ : ಫೆಬ್ರವರಿ 2023ರ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗೆ ಅರ್ಹರಿದ್ದು ಗೈರುಹಾಜರಾದ ವಿದ್ಯಾರ್ಥಿಗಳಿಗೆ ಮಾತ್ರ ಪ್ರಾಯೋಗಿಕ ಪರೀಕ್ಷೆ ಬರೆಯಲು ಅವಕಾಶ ನೀಡುವ ಬಗ್ಗೆ.

ಉಲ್ಲೇಖ : ಮಾನ್ಯ ಪ್ರಧಾನ ಕಾರ್ಯದರ್ಶಿಗಳ ಒಪ್ಪಿಗೆಯನ್ವಯ.

********

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, 2022-23ನೇ ಸಾಲಿನ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗಳನ್ನು ದಿನಾಂಕ : 06.02.2023 ರಿಂದ 28.02.2023 ರವರೆಗೆ ನಡೆಸಲಾಗುತ್ತಿದೆ. ಪ್ರಾಯೋಗಿಕ ಪರೀಕ್ಷೆಗೆ ಪ್ರವೇಶ ಪತ್ರವನ್ನು ಪಡೆದ ಅರ್ಹ ವಿದ್ಯಾರ್ಥಿಯು ನೈಜಕಾರಣಗಳಿಂದ ಪ್ರಾಯೋಗಿಕ ಪರೀಕ್ಷೆಗೆ ಗೈರುಹಾಜರಾಗಿದ್ದಲ್ಲಿ ಮಾತ್ರ, ಜಿಲ್ಲಾ ಉಪನಿರ್ದೇಶಕರುಗಳು, ತಮ್ಮ ಹಂತದಲ್ಲಿ ಈಗಾಗಲೇ ನಿಗಧಿಪಡಿಸಲಾಗಿದ್ದ ಪ್ರಾಯೋಗಿಕ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಕರುಗಳನ್ನು ನೇಮಿಸಿ ಇಂದಿನಿಂದ ದಿನಾಂಕ:**28.02.2023** ರೊಳಗೆ ಪೂರಕ ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸುವುದು.

ಪೂರಕ ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಿದ ವಿದ್ಯಾರ್ಥಿಗಳ ಭರ್ತಿ ಮಾಡಿದ ಮ್ಯಾನ್ಯುಯಲ್ ಅಂಕಪಟ್ಟಿಗಳನ್ನು ಪರೀಕ್ಷಾ ಕೇಂದ್ರಗಳಿಂದ ಪಡೆದು ಪ್ರಾಯೋಗಿಕ ಪರೀಕ್ಷೆ ಮುಗಿದ ನಂತರ **ಜಂಟಿ ನಿರ್ದೇಶಕರು(ಪರೀಕ್ಷೆ), ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಗೆ ಮುದ್ದಾಂ ಸಲ್ಲಿಸಲು ಆದೇಶಿಸಿದೆ.** ಇದನ್ನು ಹೊರತುಪಡಿಸಿ ದಿನಾಂಕ : 19.12.2022ರ ಸುತ್ತೋಲೆಯಲ್ಲಿ ಯಾವುದೇ ಬದಲಾವಣೆಗೆ ಅವಕಾಶ ನೀಡದೆ ಪರೀಕ್ಷೆ ನಡೆಸಲು ಸೂಚಿಸಿದೆ.

20/2/2023

ಅಧ್ಯಕ್ಷರು,
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ

ಗೆ,

ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು :

1. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ವಿಧಾನ ಸೌಧ ಬೆಂಗಳೂರು.
2. ಮಾನ್ಯ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳಿಗೆ ಜಿಲ್ಲಾ ಉಪನಿರ್ದೇಶಕರುಗಳ ಮೂಲಕ.
4. ಸಹಾಯಕ ನಿರ್ದೇಶಕರು, ಗಣಕ ಶಾಖೆ, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಬೆಂಗಳೂರು.-ಮಂಡಲಿಯ ವೆಬ್ ಸೈಟ್ ನಲ್ಲಿ ಅಳವಡಿಸಲು.
5. ಕಛೇರಿ ಪ್ರತಿ.